## ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಅ.ದೇವೇಗೌಡ ರವರು ನಿಯಮ 72ರ ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

**ವಿಷಯ:-** ರಾಜ್ಯ ಒಕ್ಕಲಿಗರ ಸಂಘದಲ್ಲಿ ವೈದ್ಯಕೀಯ, ಇಂಜಿನಿಯರಿಂಗ್, ಸ್ನಾತಕೋತ್ತರ ಪದವಿ ಪ್ರವೇಶಗಳಲ್ಲಿ ಮಧ್ಯವರ್ತಿಗಳ ಮುಖೇನ ನಡೆದಿರುವ ಅವ್ಯವಹಾರಗಳು, ಉಪಕರಣ ಖರೀದಿಯಲ್ಲಿ ನಡೆದಿರುವ ಅವ್ಯವಹಾರಗಳು, ಕಾಮಗಾರಿಗಳಿಗಾಗಿ ಟೆಂಡರ್ ನೀಡುವಲ್ಲಿ ನಿಯಮಗಳನ್ನು ಪಾಲಿಸದಿರುವುದು, ನೌಕರರ ನಿಯಮ ಬಾಹಿರ ಬಡ್ತಿ ಮತ್ತು ವೇತನ ಹೆಚ್ಚಳ ಹಾಗೂ ಬೇರೆ ಬೇರೆ ಜಿಲ್ಲೆಗಳಲ್ಲಿ ಜಮೀನು ಖರೀದಿ ಮತ್ತು ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ.

***

**ಉತ್ತರ:**

ರಾಜ್ಯ ಒಕ್ಕಲಿಗರ ಸಂಘ, ನಂ. 148, ಕೃಷ್ಣರಾಜೇಂದ್ರ ರಸ್ತೆ, ವಿಶ್ವೇಶ್ವರಪುರಂ, ಬೆಂಗಳೂರು-04 ಈ ಸಂಘವು ನೋಂದಣಿ ಸಂಖ್ಯೆ: 05/1906-07, ದಿನಾಂಕ:09-09-1907 ರಲ್ಲಿ ನೋಂದಣಿಯಾಗಿರುತ್ತದೆ. ಸದರಿ ಸಂಘವು ಸಮಾಜದ ಜನಾಂಗದವರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವುದು ಮತ್ತು ಪ್ರೋತ್ಸಾಹಿಸುವುದು ಪ್ರಮುಖ ಉದ್ದೇಶವಾಗಿರುತ್ತದೆ.

ರಾಜ್ಯ ಒಕ್ಕಲಿಗರ ಸಂಘದಲ್ಲಿ ವೈದ್ಯಕೀಯ, ಇಂಜಿನಿಯರಿಂಗ್, ಸ್ನಾತಕೋತ್ತರ ಪದವಿ ಪ್ರವೇಶಗಳಲ್ಲಿ ಮಧ್ಯವರ್ತಿಗಳ ಮುಖೇನ ಅವ್ಯವಹಾರಗಳು ನಡೆದಿರುವ ಬಗ್ಗೆ ಯಾವುದೇ ನಿರ್ದಿಷ್ಟ ದೂರುಗಳು ಬಂದಿರುವುದಿಲ್ಲ. ಆದರೆ, ಕಾಮಗಾರಿಗಳಿಗೆ ಟೆಂಡರ್ ನೀಡುವಲ್ಲಿ ನಿಯಮಗಳನ್ನು ಪಾಲಿಸದಿರುವ ಬಗ್ಗೆ ಹಣಕಾಸಿನ ಅವ್ಯವಹಾರಗಳು ಜರುಗಿರುವ ಕುರಿತು ಮತ್ತು ನೌಕರರ ನಿಯಮ ಬಾಹಿರ ಬಡ್ತಿ ಮತ್ತು ವೇತನ ಹೆಚ್ಚಳ ಹಾಗೂ ಬೇರೆ ಬೇರೆ ಜಿಲ್ಲೆಗಳಲ್ಲಿ ಜಮೀನು ಖರೀದಿ ಮತ್ತು ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಸಂಘದ ಪ್ರಧಾನ ಕಾರ್ಯದರ್ಶಿಯವರು ದಿ:19.07.2018ರಂದು ಸಂಘದ ಕಾರ್ಯವ್ಯಾಪ್ತಿಯ ಜಿಲ್ಲಾ ನೋಂದಣಾಧಿಕಾರಿಗಳಿಗೆ ಪತ್ರ ಬರೆದು ಈ ಹಿಂದಿನ ಆಡಳಿತ ಮಂಡಳಿಯ ಅವಧಿಯಲ್ಲಿ ನಡೆದಿರುವ ಹಣಕಾಸಿನ ಅವ್ಯವಹಾರ, ಆಡಳಿತ ದುರುಪಯೋಗ ಇತ್ಯಾದಿಗಳ ಬಗ್ಗೆ ದೂರು ನೀಡಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಸಂಘದ ನೋಂದಣಾಧಿಕಾರಿಗಳು ಸಲ್ಲಿಸಿದ ಪ್ರಸ್ತಾವನೆಯನ್ವಯ ಸರ್ಕಾರದ ಆದೇಶ ಸಂಖ್ಯೆ:ಸಇ/112/ಸಸಂನೋ/2018, ದಿನಾಂಕ:20-08-2018ರಲ್ಲಿ ಆಡಳಿತಾಧಿಕಾರಿಯಾಗಿ ಶ್ರೀ ಹೆಚ್.ಎಸ್.ಅಶೋಕಾನಂದ್, ಐ.ಎ.ಎಸ್. (ನಿವೃತ್ತ) ರವರನ್ನು ನೇಮಕ ಮಾಡಿ ಆದೇಶಿಸಲಾಗಿದೆ.

...2

ಆಡಳಿತಾಧಿಕಾರಿಗಳು ಸದರಿ ನ್ಯೂನ್ಯತೆಗಳು ಆರೋಪಗಳ ಬಗ್ಗೆ ಕ್ರಮಕೈಗೊಳ್ಳುತ್ತಿದ್ದು, ಇವರ ಆಡಳಿತ ಅವಧಿಯನ್ನು ಎರಡು ಬಾರಿ ವಿಸ್ತರಿಸಲಾಗಿದೆ. ಆಡಳಿತಾಧಿಕಾರಿಗಳು ಈ ಕೆಳಕಂಡ ಸುಧಾರಣಾ ಕ್ರಮಗಳನ್ನು ಕೈಗೊಂಡಿರುವುದಾಗಿ ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.

- ಸಂಘದ 2014-15ರಿಂದ 2017-18ನೇ ಸಾಲಿನ ಲೆಕ್ಕ ಪತ್ರಗಳನ್ನು ಲೆಕ್ಕಪರಿಶೋಧನೆ ನಡೆಸಿದ್ದು, 2018-19ನೇ ಸಾಲಿನ ಲೆಕ್ಕಪರಿಶೋಧನೆ ಪ್ರಗತಿಯಲ್ಲಿರುತ್ತದೆ.
- ಸಂಘಕ್ಕೆ ಚುನಾವಣೆ ನಡೆಸಲು ಅಂತಿಮ ಮತದಾರರ ಪಟ್ಟಿ ಸಿದ್ದಪಡಿಸಲಾಗುತ್ತಿದೆ.
- ನೀಟ್ ಪರೀಕ್ಷೆ ಪದ್ದತಿ ಬಂದ ನಂತರ ಸಂಘದ ಅಧೀನದಲ್ಲಿರುವ ವೈದ್ಯಕೀಯ, ದಂತ ವೈದ್ಯಕೀಯ ವಿದ್ಯಾ ಸಂಸ್ಥೆಗಳಿಂದ ಬಂದ ಶುಲ್ಕವು ಗರಿಷ್ಠ ಮಟ್ಟ ತಲುಪಿದೆ.
- ಅಭಿವೃದ್ಧಿ ಶುಲ್ಕ ಪದ್ದತಿಯನ್ನು ರದ್ದುಪಡಿಸಿ ಸಂಘದಲ್ಲಿ ಸೀಟು ಹಂಚಿಕೆ ಮತ್ತು ಶುಲ್ಕದಲ್ಲಿ ಪಾರದರ್ಶಕತೆಯನ್ನು ತರಲಾಗಿರುವುದರಿಂದ ಮಧ್ಯವರ್ತಿಗಳಿಗೆ ಅವಕಾಶವಿರುವುದಿಲ್ಲ.
- ಆಸ್ಪತ್ರೆಯಲ್ಲಿ ಆಧುನಿಕ ಉಪಕರಣಗಳನ್ನು ಅವಳಡಿಸಿ ಸುಧಾರಣೆ ತರಲಾಗಿದೆ. ಇದರಿಂದಾಗಿ ಆಸ್ಪತ್ರೆಯ ಆದಾಯದಲ್ಲಿ ಗಣನೀಯ ಪ್ರಗತಿಯಾಗಿರುತ್ತದೆ.
- 2016-17ನೇ ಸಾಲಿನಿಂದ ಬಾಕಿ ಇರುವ ಗುತ್ತಿಗೆದಾರರ ಬಿಲ್ ಮತ್ತು ಇಎಂಡಿ ಮೊತ್ತವನ್ನು ಮರುಪಾವತಿ ಮಾಡಲಾಗಿರುತ್ತದೆ.
- ಸಿಬ್ಬಂದಿ ನೇಮಕಾತಿ ಮತ್ತು ಬಡ್ತಿಯಲ್ಲಿ ಗೊಂದಲ ಇದ್ದ ಕಾರಣ ತಾಂತ್ರಿಕ ಮತ್ತು ವೈದ್ಯಕೀಯ ಕ್ಷೇತ್ರಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮ ರೂಪಿಸಲು ಎರಡು ಸಮಿತಿಗಳನ್ನು ರಚಿಸಿದ್ದು, ಕಾರ್ಯ ಪ್ರಗತಿಯಲ್ಲಿರುತ್ತದೆ.

ಆಡಳಿತಾಧಿಕಾರಿಗಳು ವಿಷಯದ ಆರೋಪಗಳ ಕುರಿತು ಕೈಗೊಂಡ ಕ್ರಮದ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ವರದಿ ಸಲ್ಲಿಸಲು ಸೂಚಿಸಲಾಗಿರುತ್ತದೆ. ವರದಿ ಬಂದ ನಂತರ ಅಗತ್ಯ ಕಾನೂನು ಕ್ರಮ ಜರುಗಿಸಲಾಗುವುದು ಎಂಬ ಅಂಶವನ್ನು ಸದನದ ಗಮನಕ್ಕೆ ತರಲಾಗಿದೆ.

**ಸಂಖ್ಯೆ: ಸಿಒ 65 ಸಿಎಸ್‌ಆರ್ 2019**

(ಬಸವರಾಜ ಬೊಮ್ಮಾಯಿ)
**ಮಾನ್ಯ ಸಹಕಾರ ಸಚಿವರು**